# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ಸಂ.39/ಪಿಆರ್/ 03 /2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು, ದಿನಾಂಕ : 07.11.2020

## ವಾರ್ಡ್ -39ರ ವಾರ್ಡ್ ಸಭೆಯ ನಡವಳಿ

ದಿನಾಂಕ:-07.11.2020 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.39 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಶಿವಕುಮಾರ್, ವಾರ್ಡ್-39 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

1. ಶ್ರೀ ಹೆಚ್.ಶಿವಕುಮಾರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಡಿ.ಎಸ್.ಮಂಜುನಾಥ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ
3. ಶ್ರೀ ಪ್ರಭು.ಕೆ.ಸಹಾಯಕ ಕಾರ್ಯಪಾಲಕ ಅಭಿಯಂತರರು, ಪೀಣ್ಯ ಕೈಗಾರಿಕಾ ಪ್ರದೇಶ ಉಪ ವಿಭಾಗ
4. ಶ್ರೀಮತಿ.ಶಿಲ್ಪ.ಎಸ್.ಬಿ ಸಹ ಕಂದಾಯ ಅಧಿಕಾರಿ, ಪೀ.ಕೈ.ಪ್ರ
5. ಶ್ರೀ.ರಾಮಕೃಷ್ಣ ಕಂದಾಯ ಪರಿವೀಕ್ಷಕರು ವಾ.ಸಂ.39
6. ಶ್ರೀ.ವಿ.ಕೆ.ಶ್ರೀನಿವಾಸ್ ಕೋವಿಡ್ ನೋಡಲ್ ಅಧಿಕಾರಿ
7. ಶ್ರೀ ಹೆಚ್.ರಮೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು.
8. ಜನಾ.ಡಿ.ದೇವರಾಜ್, ಸಹಾಯಕ ಅಭಿಯಂತರರು ವಾರ್ಡ್ ನಂ.39 ಚೊಕ್ಕಸಂದ್ರ
9. ಶ್ರೀ ಜೋರಪ್ಪ, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಚೊಕ್ಕಸಂದ್ರ
10. ಶ್ರೀ ಸಮೀಉಲ್ಲಾ ತೋಟಗಾರಿಕೆ ಇಲಾಖೆ ಪರಿವೀಕ್ಷಕರು.ವಾ.ವ

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ** :- ವಾರ್ಡಿನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ರ ಬಗ್ಗೆ [illegible] ಮೊಬೈಲ್ ಟೀಂ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿದೆ. ಅದರಲ್ಲಿ ಒಟ್ಟು +Veಕೇಸ್ 1517 ಒಟ್ಟು ಬಿಡುಗಡೆ -1112 ಒಟ್ಟು ಆಕ್ಟಿವ್ ಕೇಸ್-382 ಇರುತ್ತದೆ ಎಂದು ಸಭೆಗೆ ತಿಳಿಸಿದರು.

2) **ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ** :- ವಾರ್ಡ್ ಸಂಖ್ಯೆ 39 ರಲ್ಲಿ ಎಲ್ಲಾ ಆಟೋಗಳಿಗೆ ಜಿ.ಪಿ.ಎಸ್ ಮತ್ತು ಆರ್ ಎಫ್.ಐ.ಡಿ ಹಾಗೂ ಧ್ವನಿವರ್ಧಕ ಅಳವಡಿಸಲಾಗಿರುತ್ತದೆ. ಕಸ ವಿಂಗಡಣೆಯ ಬಗ್ಗೆ ಹೆಚ್ಚಿನ ಆಸಕ್ತಿ ವಹಿಸಲಾಗಿರುತ್ತದೆ. ಪ್ರತಿ ದಿನ ಹಸಿ ಕಸ ಬೇರ್ಪಡಿಸಿ, ಹಾಕುವಂತೆ ಧ್ವನಿವರ್ಧಕ ಮೂಲಕ ಸಾರ್ವಜನಿಕರಿಗೆ ಅರಿವು ನೀಡಲಾಗುತ್ತಿದೆ ಅದರಂತೆ ವಾರ್ಡ್ ಸಂಖ್ಯೆ 39 ರಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಸುಗಮವಾಗಿ ನಡೆಯುತ್ತಿದೆ ಎಂದು ಸಭೆಗೆ ಹಿರಿಯ ಆರೋಗ್ಯ ಪರಿವೀಕ್ಷಕರು ತಿಳಿಸಿದರು.

3) **ಬೆಂಗಳೂರು ನೀರು ಸರಬರಾಜು ಹಾಗೂ ಒಳ ಚರಂಡಿ ಮಂಡಳಿಗೆ ಸಂಬಂಧಿಸಿದಂತೆ**:- ಸದರಿ ಇಲಾಖೆ ವತಿಯಿಂದ ಒಳಚರಂಡಿ ಮತ್ತು ಕುಡಿಯುವ ನೀರಿನ ಪೈಪ್ ಲೈನ್ ದುರಸ್ತಿಗಾಗಿ ಅಗೆದಿರುವ ರಸ್ತೆಗಳನ್ನು ಸಮರ್ಪಕವಾಗಿ ದುರಸ್ತಿಗೊಳಿಸಲು ವಾರ್ಡ್ ಸಹಾಯಕ ಅಭಿಯಂತರರು ತಿಳಿಸಿದರು.

- ರಾಜಕಾಲುವೆ ವಿಭಾಗದಿಂದ ನೆಲಗದರನಹಳ್ಳಿ ಸೇತುವೆ ಕೆಲಸ ನಡೆಸುತ್ತಿದ್ದು ಸ್ಥಳದಲ್ಲಿ ನೀರಿನ ಕೊಳವೆಗಳಿದ್ದು ಸದರಿ ಕೊಳವೆಗಳನ್ನು ಸೇತುವೆಗೆ ಸಮಾನಾಂತರವಾಗಿ ತುರ್ತಾಗಿ ಎತ್ತರಿಸುವಂತೆ ಸಹಾಯಕ ಅಭಿಯಂತರರಿಗೆ ತಿಳಿಸಿದರು.

4) **ಉದ್ಯಾನವನ ನಿರ್ವಹಣೆ** :- ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳಲ್ಲಿ ಕತ್ತರಿಸಿದ ಗಿಡದ ಭಾಗಗಳನ್ನು ಗೊಬ್ಬರಕ್ಕಾಗಿ ಘನತ್ಯಾಜ್ಯ ಇಲಾಖೆ ರವರಿಗೆ ನೀಡಲು ತಿಳಿಸಿದರು.

ಪು.ತಿ.ನೋ

Scanned by CamScanner

4) <u>ರಾಜ ಕಾಲುವೆ ವಿಭಾಗ</u> :- ರಾಜಕಾಲುವೆಯಲ್ಲಿ ತುಂಬಿದ್ದ ಹೂಳನ್ನು ತೆಗೆದಿದ್ದು ಈ ಬಾರಿ ಬಂದ ಮಳೆಯಿಂದ ನೀರು ಸರಾಗವಾಗಿ ಹರಿದಿದ್ದು ಎಲ್ಲಿಯೂ ವಸತಿ ಪ್ರದೇಶಕ್ಕೆ ನುಗ್ಗಿರುವುದಿಲ್ಲಕೆಲವು ಕಡೆ ರಾಜಕಾಲುವೆ ಹೂಳು ತೆಗೆಯುವ ಕೆಲಸ ಪ್ರಗತಿಯಲ್ಲಿದ್ದು ತುರ್ತಾಗಿ ಮುಗಿಸಲಾಗುವುದು ಎಂದು ಸಭೆಗೆ ತಿಳಿಸಲಾಯಿತು.

5) <u>ಕಾಮಗಾರಿ ವಿಭಾಗ</u> :- ವಿದ್ಯಾನಗರ,ಹೆಚ್ ಎಂ ಟಿ ಬಡಾವಣೆಗಳಲ್ಲಿ ಗೃಹಲಕ್ಷ್ಮಿ ಬಡಾವಣೆಗಳಲ್ಲಿ ಬರುವ ಮುಖ್ಯರಸ್ತೆಯಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚುವ ಕೆಲಸ ಪ್ರಗತಿಯಲ್ಲಿದ್ದು ಸದರಿ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯನ್ನು ತುರ್ತಾಗಿ ಮುಗಿಸಲು ನೋಡಲ್ ಅಧಿಕಾರಿಗಳು ವಾರ್ಡ್ ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ಗಳ ನೋಡಲ್ ಅಧಿಕಾರಿ
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧಿಕಾರಿಗಳ ಮಾಹಿತಿಗಾಗಿ</u>

1. ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2. ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3. ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕೈ.ಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು (SWD) ರವರ ಮಾಹಿತಿಗಾಗಿ ಕಳುಹಿಸಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)ರವರ ಮಾಹಿತಿಗಾಗಿ ಕಳುಹಿಸಿದೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್-5 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ

Scanned by CamScanner